# ಸಂಸತ್ ಕಲಾಪ ಮುಂದೂಡಿಕೆ

ನವದೆಹಲಿ: ಸಂಸದರಲ್ಲಿ ಸೋಂಕು ಪ್ರಮಾಣ ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಸಂಸತ್‌ನ ಮುಂಗಾರು ಅಧಿವೇಶನವನ್ನು ಬುಧವಾರ ಅನಿರ್ದಿಷ್ಟಾವಧಿಗೆ ಮುಂದೂಡಿಕೆ ಮಾಡಲಾಗಿದೆ. ನಿಗದಿಯಾಗಿರುವ ಪ್ರಕಾರ ಅ.1ರ ವರೆಗೆ ಕಲಾಪ ಮುಂದುವರಿಯಬೇಕಾಗಿತ್ತು. ಇದೇ ಮೊದಲ ಬಾರಿಗೆ ಸಾಮಾಜಿಕ ಅಂತರ ಕಾಯ್ದುಕೊಂಡು ಲೋಕಸಭೆ, ರಾಜ್ಯಸಭೆ ಕಲಾಪ ನಡೆಸಲು ಕ್ರಮ ಕೈಗೊಳ್ಳಲಾಗಿತ್ತು. ಲೋಕಸಭೆಯಲ್ಲಿ ಪ್ರಮುಖ ಬಂದರುಗಳಿಗೆ ಸಂಬಂಧಿಸಿದ ವಿಧೇಯಕ ಅಂಗೀಕರಿಸಿದ ಬಳಿಕ ಕಲಾಪವನ್ನು ಅನಿರ್ದಿಷ್ಟಾವಧಿಗೆ ಮುಂದೂಡಿಕೆ ಮಾಡುವ ಘೋಷಣೆಯನ್ನು ಸ್ಪೀಕರ್ ಓಮ್ ಬಿರ್ಲಾ ಪ್ರಕಟಿಸಿದರು. ರಾಜ್ಯಸಭೆಯಲ್ಲಿ ಕಾರ್ಮಿಕ ಕ್ಷೇತ್ರಕ್ಕೆ ಸಂಬಂಧಿಸಿದ ಮೂರು ಸಂಹಿತೆಗಳನ್ನು ಅನುಮೋದನೆ ಮಾಡಿದ ಬಳಿಕ ಕಲಾಪ ಮುಂದೂಡಲಾಯಿತು. ಸೋಮವಾರಷ್ಟೇ 3 ರೈತ ವಿಧೇಯಕಗಳನ್ನು ಅನುಮೋದಿಸುವ ವೇಳೆ ಅನುಚಿತವಾಗಿ ವರ್ತಿಸಿದ್ದಕ್ಕೆ ಎಂಟು ಮಂದಿ ಸದಸ್ಯರನ್ನು ಸಸ್ಪೆಂಡ್ ಮಾಡಲಾಗಿತ್ತು.